# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 110 |
| ಸದಸ್ಯರ ಹೆಸರು | : | ಶ್ರೀ ಕೆ. ಗೋವಿಂದರಾಜು |
| ಉತ್ತರಿಸುವ ದಿನಾಂಕ: | : | 10-07-2018 |
| ಉತ್ತರಿಸುವವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಮಹಾನಗರದಲ್ಲಿ ತ್ಯಾಜ್ಯಗಳ ಉತ್ಪತ್ತಿ ಹೆಚ್ಚಾಗಿರುವ ಕಾರಣ ಬಿ.ಬಿ.ಎಂ.ಪಿ. ವ್ಯಾಪ್ತಿಗೆ ಒಳಪಟ್ಟು ಸಂಪೂರ್ಣ ಪ್ಲಾಸ್ಟಿಕ್ ನಿಷೇಧ ಮಾಡಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ: 11-03-2016 ರಲ್ಲಿ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್ ನಿಂದ ತಯಾರಾದರಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ಹಾಗೂ ಬಳಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿರುತ್ತದೆ.<br><br>ಈ ಅಧಿಸೂಚನೆಯಲ್ಲಿ ಪ್ಲಾಸ್ಟಿಕ್ ನಿಷೇಧವನ್ನು ಜಾರಿಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರು, ಜಂಟಿ ಆಯುಕ್ತರುಗಳು, ಕಂದಾಯ ಅಧಿಕಾರಿಗಳು, ಪಾಲಿಕೆಯ ಎಲ್ಲಾ ಸಾರ್ವಜನಿಕ ಆರೋಗ್ಯ ಅಧಿಕಾರಿಗಳು ಮತ್ತು ಎಲ್ಲಾ ಅಭಿಯಂತರರಿಗೆ ಅಧಿಕಾರವನ್ನು ನೀಡಲಾಗಿರುತ್ತದೆ.<br><br>ಮೇಲ್ಕಂಡ ಅಧಿಸೂಚನೆಯನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ರವರು ನೀಡಿರುವ ಮಾರ್ಗ ಸೂಚಿಯಂತೆ ಪ್ಲಾಸ್ಟಿಕ್ ನಿಷೇಧವನ್ನು ಅನುಷ್ಠಾನಗೊಳಿಸುತ್ತಿದ್ದು, ಈ ತಹಲ್‌ವರೆಗೂ 110476.37 ಕೆ.ಜಿ. ಪ್ಲಾಸ್ಟಿಕ್‌ನ್ನು ಮುಟ್ಟುಗೋಲು ಹಾಕಲಾಗಿರುತ್ತದೆ ಹಾಗೂ ರೂ. 1,85,04,480.00/- ಗಳ ದಂಡವನ್ನು ವಿಧಿಸಲಾಗಿರುತ್ತದೆ. |

| | | |
|---|---|---|
| ಆ) | ಬೆಂಗಳೂರು ನಗರದ ಕಸವಿಲೇವಾರಿಗೆ ಎಷ್ಟು ಘಟಕಗಳು ಕಾರ್ಯ ನಿರ್ವಹಿಸುತ್ತಿವೆ; | ಬೆಂಗಳೂರು ನಗರದ ಕಸವಿಲೇವಾರಿಗೆ ಹೊಸದಾಗಿ 07 ಘಟಕಗಳನ್ನು 2015-16ನೇ ಸಾಲಿನಲ್ಲಿ ಸ್ಥಾಪನೆ ಮಾಡಲಾಗಿದೆ (ಸೀಗೇಹಳ್ಳಿ, ಕನ್ನಹಳ್ಳಿ, ಲಿಂಗದೀರನಹಳ್ಳಿ, ದೊಡ್ಡಬಿದರಕಲ್ಲು, ಸುಬ್ಬರಾಯನಪಾಳ್ಯ, ಚಿಕ್ಕನಾಗಮಂಗಲ ಮತ್ತು ಕೆಸಿಡಿಸಿ ಘಟಕದ ಉನ್ನತೀಕರಣ) ಇದರ ಜೊತೆಗೆ ಪಿ.ಪಿ.ಪಿ ಮಾಡೆಲ್‌ನಲ್ಲಿ ಮಾವಳ್ಳಿಪುರ ಹಾಗೂ ಎಂ.ಎಸ್.ಜಿ.ಪಿ ಘಟಕಗಳನ್ನು ಸಹಾ ಸ್ಥಾಪಿಸಲಾಗಿರುತ್ತದೆ.<br><br>ಮಾವಳ್ಳಿಪುರ ಘಟಕದ ನಿರ್ವಹಣೆ ಜವಾಬ್ದಾರಿಯನ್ನು ಈ ಹಿಂದೆ ಮೆ॥ ರಾಮ್ಕಿ ಸಂಸ್ಥೆ ಇವರಿಗೆ ವಹಿಸಿದ್ದು, ಅವರ ನಿರ್ವಹಣೆ ಸರಿಯಿಲ್ಲದ ಕಾರಣ ಸದರಿ ಸಂಸ್ಥೆಯ ಸೇವೆಯನ್ನು ರದ್ದುಗೊಳಿಸಿ ಬಿ.ಬಿ.ಎಂ.ಪಿ. ವತಿಯಿಂದಲೇ ನಿರ್ವಹಣೆ ಮಾಡಲಾಗುತ್ತಿದೆ. |
| ಇ) | ಕಸ ವಿಲೇವಾರಿ ಘಟಕಗಳ ಸಂಖ್ಯೆಯನ್ನು ಹೆಚ್ಚುಮಾಡಿ ಶೀಘ್ರ ಕಸವಿಲೇವಾರಿಗೆ ಕ್ರಮ ಕೈಗೊಳ್ಳಲಾಗುವುದೇ? | |

ಸಂಖ್ಯೆ: ನಅಇ 352 ಎಂಎನ್‌ವೈ 2018

(ಡಾ॥ ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ